# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2016-17ನೇ ಸಾಲಿನ ಕರ್ನಾಟಕ ಗ್ಯಾಸೆಟಿಯರ್ ಇಲಾಖೆಯ ಕ್ರಿಯಾ ಯೋಜನೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: ಮುಖ್ಯ ಸಂಪಾದಕರು,ಕರ್ನಾಟಕ ಗ್ಯಾಸೆಟಿಯರ್ ಇಲಾಖೆರವರ ಪತ್ರ ಸಂಖ್ಯೆ ಕಗ್ಯಾಇ/ಸಿ(2): :2016-17 ದಿನಾಂಕ: 06/5/2016.

ಪ್ರಸ್ತಾವನೆ:

ಕರ್ನಾಟಕ ಗ್ಯಾಸೆಟಿಯರ್ ಇಲಾಖೆರವರು 2016-17ನೇ ಸಾಲಿನ ಯೋಜನಾ ಕಾರ್ಯಕ್ರಮಕ್ಕಾಗಿ ಲೆಕ್ಕ ಶೀರ್ಷಿಕೆ 3454-02-110-0-01-059 ರಡಿ ಕರ್ನಾಟಕ ಗ್ಯಾಸೆಟಿಯರ್ ಇಲಾಖೆಗೆ ರೂ.20.00ಲಕ್ಷಗಳ ಅನುದಾನ ನೀಡಲಾಗಿದೆ. ಹಂಚಿಕೆ ಮಾಡಿರುವ ಅನುದಾನಕ್ಕೆ ಅನುಗುಣವಾಗಿ ಕ್ರಿಯಾ ಯೋಜನೆ ತಯಾರಿಸಿ ಮುಂದುವರೆದ ಯೋಜನೆಗಳ ಅನುಷ್ಠಾನಕ್ಕಾಗಿ ಆದೇಶ ಹೊರಡಿಸುವಂತೆ ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ ಇವರು ಮೇಲೆ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 8 ಕರಾಗೆ 2016**
**ಬೆಂಗಳೂರು, ದಿನಾಂಕ: 31/5/2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಕರ್ನಾಟಕ ಗ್ಯಾಸೆಟಿಯರ್ ಇಲಾಖೆಗೆ 2016-17ನೇ ಸಾಲಿನ ಕ್ರಿಯಾ ಯೋಜನೆ ಮತ್ತು ಮುಂದುವರೆದ ಯೋಜನಾ ಕಾರ್ಯಕ್ರಮಗಳಿಗೆ ಅನುಬಂಧದಲ್ಲಿ ಸೂಚಿಸಿರುವಂತೆ ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆಯನ್ನು ನೀಡಲಾಗಿದೆ.

7/6/16

## ಷರತ್ತುಗಳು

7/6/16.

1. 2015-16 ನೇ ಸಾಲಿನಲ್ಲಿ ಅನುಮೋದನೆಯಾದ ಹೊಸದಾಗಿ ಮಂಜೂರಾದ ಯೋಜನಾ ಕಾರ್ಯಕ್ರಮಗಳನ್ನು ಹಾಗೂ ಮುಂದುವರಿದ ಯೋಜನಾ ಕಾರ್ಯಕ್ರಮಗಳನ್ನು ಮಾತ್ರ ಮುಂದುವರೆಸಬೇಕು.
2. ಮುಂದುವರೆದ ಯೋಜನಾ ಕಾರ್ಯಕ್ರಮಗಳಲ್ಲಿ ಯಾವುದೇ ಹೊಸ ಘಟಕಗಳು ಅಥವಾ ಹೊಸ ಯೋಜನೆಗಳು ಒಳಗೊಂಡಿದಲ್ಲಿ ಅವುಗಳಿಗೆ ಪ್ರತ್ಯೇಕವಾದ ಪ್ರಸ್ತಾವನೆಗಳನ್ನು ಸಲ್ಲಿಸಿ ನಿಯಮಾನುಸಾರ ಮಂಜೂರಾತಿ ಪಡೆಯಬೇಕು.
3. ಹೊಸ ಸಂಸ್ಥೆಗಳಿಗೆ ಅಥವಾ ಅದೇ ಯೋಜನೆಯ ಹೊಸ ಪ್ರಕರಣಗಳಲ್ಲಿ ಒಳಗೊಂಡಿರುವ ಕೆಲಸಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಸಾಲ ಬಂಡವಾಳ ವೆಚ್ಚ ಸಹಾಯಧನ/ಸೋಡಿ ಮುಂತಾದವುಗಳ ಮಂಜೂರಾತಿ ಇವು ಆಯಾಯ ಬಾಬ್ತುಗಳಿಗೆ ಸಂಬಂಧಿಸಿದ ಪ್ರತ್ಯಾಯೋಜಿತ ಅಧಿಕಾರಗಳ ಪರಿಮಿತಿಯಲ್ಲಿರಬೇಕು.
4. ಆರ್ಥಿಕ ಇಲಾಖೆಯ ಮಿತವ್ಯಯ ಆದೇಶಗಳಿಗೆ ಒಳಪಡುವ ಸಿಬ್ಬಂದಿ ಸೃಜನೆ, ವಾಹನ ಮತ್ತು ಯಂತ್ರ ಸಾಮಗ್ರಿ ಖರೀದಿ, ಹೊಸ ಕಛೇರಿ ತೆರೆಯುವುದು, ಹೊಸ ಯೋಜನೆಗಳಿಗೆ ಮಂಜೂರಾತಿ, ಇವುಗಳಿಗೆ ಪ್ರತ್ಯೇಕವಾಗಿ ಆರ್ಥಿಕ ಇಲಾಖೆಯ ಹಾಗೂ ಯೋಜನಾ ಇಲಾಖೆಯ ಅನುಮೋದನೆಯನ್ನು ಪಡೆಯಲು ಪ್ರಸ್ತಾವನೆಗಳನ್ನು ಸಲ್ಲಿಸುವುದು.

Office of the Chief Editor
No.
Date
Karnataka Gazetteer Department

480 03/06/16

96 03/06/16

...2

5. ಕಾರ್ಯಕ್ರಮಗಳನ್ನು ಕಾರ್ಯಗತಗೊಳಿಸಲು ಜವಾಬ್ದಾರರಾದ ಅಧಿಕಾರಿಗಳು ಅವರಿಗೆ ನೀಡಲಾದ ಆರ್ಥಿಕ ಅಧಿಕಾರಕ್ಕೆ ಒಳಪಟ್ಟು ಯೋಜನಾ ಕಾರ್ಯಕ್ರಮಗಳನ್ನು ಕಾರ್ಯರೂಪಕ್ಕೆ ತರತಕ್ಕದ್ದು.
6. 1999ರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮವನ್ನು ಹಾಗೂ ಅದರ ನಿಯಮಗಳು 2000 ವನ್ನು ಕಡ್ಡಾಯವಾಗಿ ಪಾಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 96 ದಿನಾಂಕ: 10.07.1996ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
G. Annapurna
(ಜಿ.ಅನ್ನಪೂರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ
(ಆಡಳಿತ ಕನ್ನಡ)

ಇವರಿಗೆ :-

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ), (ಇ&ಎಸ್‌ಎಸ್‌ಎ), (ಎ&ಇ) ಕರ್ನಾಟಕ, ಬೆಂಗಳೂರು-560001
2) ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ನಿರ್ದೇಶನಾಲಯ, ವಿಕಾಸ ಸೌಧ ಬೆಂಗಳೂರು.
3) ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
4) ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಕಾವೇರಿ ಭವನ ಬೆಂಗಳೂರು.
5) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ, ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6) ಆಂತರಿಕ ಆರ್ಥಿಕ ಸಲಹೆಗಾರರು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7) ಸರ್ಕಾರದ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8) ನಿರ್ದೇಶಕರು ಜನಶಕ್ತಿ ಮತ್ತು ಉದ್ಯೋಗ ವಿಭಾಗ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7), ವಿಧಾನ ಸೌಧ, ಬೆಂಗಳೂರು.
10) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು.
11) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು
12) ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚುವರಿ ಪ್ರತಿಗಳು.

## ಅನುಬಂಧ

**2016–17ನೇ ಸಾಲಿಗೆ ಯೋಜನಾ ಲೆಕ್ಕ ಶೀರ್ಷಿಕೆ ಅಡಿ ಕರ್ನಾಟಕ ಗ್ಯಾಸೆಟಿಯರ್ ಇಲಾಖೆಯು ಹಮ್ಮಿಕೊಂಡಿರುವ ಕಾರ್ಯಕ್ರಮಗಳು.**

(ಲಕ್ಷ ರೂ.ಗಳಲ್ಲಿ)

| | | |
|---|---|---|
| 1. | 1) ತುಮಕೂರು ಜಿಲ್ಲಾ ಗ್ಯಾಸೆಟಿಯರ್ ಕನ್ನಡ ಆವೃತ್ತಿಯ ಪುಟ ವಿನ್ಯಾಸ ಮತ್ತು ಮುದ್ರಣ.<br>2) ಬೀದರ್ ಜಿಲ್ಲಾ ಗ್ಯಾಸೆಟಿಯರ್ ಆಂಗ್ಲ ಆವೃತ್ತಿಯ ಸಂಪಾದನೆ ಮತ್ತು ಮುದ್ರಣ<br>3) ಕರ್ನಾಟಕ ಕೈಪಿಡಿ – ಕನ್ನಡ ಆವೃತ್ತಿಯ ಸಂಪಾದನೆ ಮತ್ತು ಮುದ್ರಣ<br>4) ದಾವಣಗೆರೆ,ಚಿತ್ರದುರ್ಗ ಹಾಗೂ ಕೊಪ್ಪಳ ಜಿಲ್ಲೆಗಳ ತಾಲ್ಲೂಕು ಗ್ಯಾಸೆಟಿಯರ್‌ಗಳ ಮುದ್ರಣ<br>5) History of Mysore by C. Hayavadanarao Volume 1, 2 & 3 ರ ಮರು ಮುದ್ರಣ | 14.78 |
| 2. | ಗಿರಿಜನ ಉಪಯೋಜನೆ ಅಡಿ ಕರ್ನಾಟಕ ಕೈಪಿಡಿ ಅನ್ನು ಪರಿಶಿಷ್ಟ ಪಂಗಡದ ವಿದ್ಯಾರ್ಥಿ ನಿಲಯಗಳಿಗೆ ಉಚಿತವಾಗಿ ವಿತರಣೆ ಮಾಡುವ ಸಲುವಾಗಿ | 1.79 |
| 3. | ವಿಶೇಷ ಘಟಕ ಯೋಜನೆ ಅಡಿ ಕರ್ನಾಟಕ ಕೈಪಿಡಿ ಅನ್ನು ಪರಿಶಿಷ್ಟ ಜಾತಿಯ ವಿದ್ಯಾರ್ಥಿ ನಿಲಯಗಳಿಗೆ ಉಚಿತವಾಗಿ ವಿತರಣೆ ಮಾಡುವ ಸಲುವಾಗಿ | 3.43 |
| | ಒಟ್ಟು ರೂ. | **20.00** |

G. Annapurna

(ಜಿ.ಅನ್ನಪೂರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ
(ಆಡಳಿತ ಕನ್ನಡ)
2/5/11